# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **757** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ಒಟ್ಟು 20,469 ಸರ್ಕಾರಿ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿದ್ದು, ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ | ಸರ್ಕಾರಿ ನ್ಯಾಯಬೆಲೆ ಅಂಗಡಿ ಪರವಾನಗಿ ಪಡೆಯಲು ಇರುವ ಮಾನದಂಡಗಳೇನು; (ವಿವರ ನೀಡುವುದು) | ಹೊಸ ನ್ಯಾಯಬೆಲೆ ಅಂಗಡಿ ಮಂಜೂರಾತಿಗೆ ಕರ್ನಾಟಕ ಅಗತ್ಯ ವಸ್ತುಗಳ (ಸಾ.ವಿ.ಪ) ನಿಯಂತ್ರಣ ತಿದ್ದುಪಡಿ ಆದೇಶ ದಿನಾಂಕ: 21.05.2018 ಮತ್ತು 18.12.2020 ರಂತೆ ಕೆಳಕಂಡಂತೆ ಆದ್ಯತೆ ನಿಗಧಿಪಡಿಸಲಾಗಿದೆ.<br>i. ಸರ್ಕಾರದ ನಿಗಮಗಳು / ಗ್ರಾಮ ಪಂಚಾಯಿತಿ / ಸ್ಥಳೀಯ ನಗರ ಸಂಸ್ಥೆಗಳು<br>ii. ಸಹಕಾರ ಸಂಘಗಳು<br>1) ತಾಲ್ಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘ (ನಿ) (TAPCMS)<br>2)ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ಅಥವಾ ವ್ಯವಸಾಯ ಸೇವಾ ಸಹಕಾರಿ ಸಂಘ ನಿಯಮಿತ (VSSSN)<br>3) ತೋಟಗಾರಿಕೆಯ ಉತ್ಪಾದಕರ ಸಹಕಾರ ಮಾರ್ಕೆಟಿಂಗ್ ಮತ್ತು ಸಂಸ್ಕರಣೆ ಸಂಘ ನಿಯಮಿತ (HOPCOMS)<br>4) ನೋಂದಾಯಿತ ಸಹಕಾರಿ ಸಂಘಗಳು.<br>5) ನೋಂದಾಯಿತ ಪ್ರಾಥಮಿಕ ಗ್ರಾಹಕರ ಸಹಕಾರಿ ಸಂಘ<br>6)LAMPS ಸಹಕಾರಿ ಸಂಘಗಳು (ಬೃಹತ್ ಗ್ರಾಹಕ ಆದಿವಾಸಿ ವಿವಿಧೋದ್ದೇಶ ಸಂಘ)<br>7) ನೋಂದಾಯಿತ ನೇಕಾರರ ಸಹಕಾರಿ ಸಂಘ<br>8) ನೋಂದಾಯಿತ ಮಹಿಳಾ ವಿವಿಧೋದ್ದೇಶ ಸಹಕಾರಿ ಸಂಘ<br>9) ನೋಂದಾಯಿತ ವಿವಿಧೋದ್ದೇಶ ಸಹಕಾರಿ ಸಂಘ<br>10) ವಿಕಲಚೇತನ ಕಲ್ಯಾಣ ಸಹಕಾರಿ ಸಂಘ |

| | | |
| --- | --- | --- |
| | | 11) ಸಹಕಾರಿ ಸಂಘಗಳಿಂದ ನಡೆಸಲ್ಪಡುತ್ತಿರುವ ಬ್ಯಾಂಕ್ ಅಥವಾ ಸಹಕಾರಿ ಬ್ಯಾಂಕ್‌ಗಳು<br>12) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಮಾನ್ಯತೆ ಪಡೆದು ಕಳೆದ (3) ವರ್ಷಗಳಿಂದ ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಕಳೆದ ಒಂದು ವರ್ಷದಲ್ಲಿ ಕನಿಷ್ಠ ಒಂದು ಲಕ್ಷ ರೂಪಾಯಿ ಬ್ಯಾಂಕ್ ಖಾತೆಯಲ್ಲಿ ನಿರಂತರವಾಗಿ ಠೇವಣಿ ಹೊಂದಿರುವಂತಹ ಸ್ಥಳೀಯ ಸ್ತ್ರೀಶಕ್ತಿ ಗುಂಪುಗಳು ಹಾಗೂ ಮಹಿಳಾ ಸ್ವ ಸಹಾಯ ಗುಂಪುಗಳು.<br>➢ **ವೈಯಕ್ತಿಕ:**<br>• ಅಂಗವಿಕಲರ ವರ್ಗ (ಪ್ರಾರಂಭಿಕವಾಗಿ 400 ನ್ಯಾಯಬೆಲೆ ಅಂಗಡಿಗಳು)<br>• ತೃತಿಯ ಲಿಂಗ/ಮಂಗಳ ಮುಖಿಯರ ವರ್ಗ (ಪ್ರಾರಂಭಿಕವಾಗಿ 30 ನ್ಯಾಯಬೆಲೆ ಅಂಗಡಿಗಳು) |
| ೩ | ನ್ಯಾಯಬೆಲೆ ಅಂಗಡಿಗಳಿಗೆ ಆಹಾರ ಪದಾರ್ಥಗಳನ್ನು ಪೂರೈಕೆ ಮತ್ತು ಸರಬರಾಜು ಮಾಡಲು ಇರುವಂತಹ ನಿಬಂಧನೆಗಳಾವುವು; | ನ್ಯಾಯಬೆಲೆ ಅಂಗಡಿಗಳಲ್ಲಿರುವ ಪ್ರತಿ ಅಂತ್ಯೋದಯ ಪಡಿತರ ಚೀಟಿಗೆ 35 ಕೆ.ಜಿ ಆಹಾರಧಾನ್ಯಗಳನ್ನು ಮತ್ತು ಆದ್ಯತಾ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ 5 ಕೆ.ಜಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ. ಕೇಂದ್ರ NFSA ಫಲಾನುಭವಿಗಳಿಗೆ ಹಂಚಿಕೆ ಮಾಡಲು ಪ್ರತಿ ಮಾಹೆ ಕೇಂದ್ರ ಸರ್ಕಾರದಿಂದ 2,17,403 ಮೆಟ್ರಿಕ್ ಟನ್ ಆಹಾರಧಾನ್ಯ ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಅಕ್ಕಿ ಪ್ರಮಾಣವನ್ನು ಜಿಲ್ಲೆಗಳಲ್ಲಿರುವ ಭಾರತ ಆಹಾರ ನಿಗಮದ ಗೋದಾಮುಗಳಿಂದ ಸಗಟು ಗೋದಾಮುಗಳಿಗೆ ಎತ್ತುವಳಿ ಮಾಡಲಾಗುತ್ತಿದೆ.<br>ನಂತರ ಸಗಟು ಗೋದಾಮುಗಳಿಂದ ನ್ಯಾಯಬೆಲೆ ಅಂಗಡಿಗಳಿಗೆ ಎತ್ತುವಳಿ ಮಾಡಲಾಗುತ್ತಿದೆ. ಇದಕ್ಕಾಗಿ ಟೆಂಡರ್ ಪ್ರಕ್ರಿಯೆ ಮೂಲಕ ಸಗಟು ಚಿಲ್ಲರೆ ಸಾಗಾಣಿಕೆ ಗುತ್ತಿಗೆದಾರರನ್ನು ನೇಮಕಾತಿ ಮಾಡಲಾಗಿರುತ್ತದೆ.<br>ರಾಜ್ಯ NFSA ಪ್ರತಿ ಫಲಾನುಭವಿಗಳಿಗೆ ಪ್ರತಿ ಮಾಹೆ 5 ಕೆ.ಜಿ ಆಹಾರಧಾನ್ಯ ವಿತರಣೆ ಮಾಡಲಾಗುತ್ತಿದ್ದು ಪಡಿತರ ಫಲಾನುಭವಿಗಳಿಗೆ ವಿತರಿಸಲು ಅಗತ್ಯವಿರುವ ಅಕ್ಕಿ ಪ್ರಮಾಣವನ್ನು ಕೇಂದ್ರ ಸರ್ಕಾರವು Open Market Sale Scheme(OMSSD)ರಡಿ ಅಕ್ಕಿ ಮಾರಾಟ ಪ್ರಾರಂಭಿಸಿದ್ದು, ರಾಜ್ಯ NFSA ಫಲಾನುಭವಿಗಳಿಗೆ |

| | | |
|---|---|---|
| | | ಅಗತ್ಯವಿರುವ ಅಕ್ಕಿಯನ್ನು ಭಾರತ ಆಹಾರ ನಿಗಮದಿಂದ ಖರೀದಿಸಿ ಎತ್ತುವಳಿ ಮಾಡಲಾಗುತ್ತಿದೆ. |
| ಈ | ರಾಜ್ಯದಲ್ಲಿರುವ ಜಿಲ್ಲೆಗಳಿಗೆ ಯಾವ ಯಾವ ರೀತಿಯ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಅಂತ್ಯೋದಯ ಅನ್ನಯೋಜನೆಯ ಪ್ರತಿ ಪಡಿತರ ಚೀಟಿಗೆ 35 ಕೆ.ಜಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 21 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ 14 ಕೆ.ಜಿ ರಾಗಿ/ ಜೋಳವನ್ನು ಹಂಚಿಕೆ ಮಾಡಲಾಗುತ್ತಿದೆ.<br>ಆದ್ಯತಾ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ 5 ಕೆ.ಜಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 3 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ 02 ಕೆ.ಜಿ ರಾಗಿ/ ಜೋಳವನ್ನು ಹಂಚಿಕೆ ಮಾಡಲಾಗುತ್ತಿದೆ. |

**ಆನಾಸ 100 ಆನಾಸ 2024**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು

ಅನುಬಂಧ-1

# ANNEXURE 1

| SL NO | DISTRICT | SHOP COUNT |
|---|---|---|
| 1 | BAGALKOTE | 744 |
| 2 | BALLARI | 357 |
| 3 | BANGALORE EAST | 115 |
| 4 | BANGALORE NORTH | 177 |
| 5 | BANGALORE SOUTH | 179 |
| 6 | BANGALORE WEST | 289 |
| 7 | BELAGAVI | 1871 |
| 8 | BENGALURU | 598 |
| 9 | BENGALURU RURAL | 374 |
| 10 | BIDAR | 749 |
| 11 | CHAMARAJANAGARA | 477 |
| 12 | CHIKKABALLAPURA | 540 |
| 13 | CHIKKAMAGALURU | 531 |
| 14 | CHITRADURGA | 628 |
| 15 | DAKSHINA KANNADA | 457 |
| 16 | DAVANAGERE | 728 |
| 17 | DHARWAR | 487 |
| 18 | GADAG | 363 |
| 19 | HASSAN | 886 |
| 20 | HAVERI | 464 |
| 21 | KALABURAGI | 997 |
| 22 | KODAGU | 274 |
| 23 | KOLAR | 611 |
| 24 | KOPPAL | 455 |
| 25 | MANDYA | 719 |
| 26 | MYSURU | 1016 |
| 27 | RAICHUR | 750 |
| 28 | RAMANAGARA | 560 |
| 29 | SHIVAMOGGA | 597 |
| 30 | TUMAKURU | 1129 |
| 31 | UDUPI | 295 |
| 32 | UTTARA KANNADA | 412 |
| 33 | VIJAYANAGARA | 347 |
| 34 | VIJAYAPURA | 890 |
| 35 | YADGIR | 403 |
| **TOTAL** | | **20469** |